## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಉಪಾಧ್ಯಕ್ಷರುಗಳಿಗೆ ಹೆಚ್ಚಿನ ವೇತನ ಭತ್ಯೆ ಇತರೆ ಸೌಲಭ್ಯಗಳನ್ನು ನೀಡುವ ಬಗ್ಗೆ.

**ಓದಲಾಗಿದೆ:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 75 ಜಿಪಸ 2016, ದಿನಾಂಕ:19-11-2016.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ರಾಜ್ಯ ಸರ್ಕಾರವು ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರುಗಳಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಿದ್ದು, ಅವರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲಾಗಿದೆ.

ಅನೇಕ ಜಿಲ್ಲಾ ಪಂಚಾಯತಿಗಳ ಉಪಾಧ್ಯಕ್ಷರುಗಳು ಸರ್ಕಾರಕ್ಕೆ ಮನವಿ ಸಲ್ಲಿಸಿ ವೇತನ ಮನೆ ಬಾಡಿಗೆ, ವಾಹನ ಸೌಕರ್ಯ, ಇಂಧನ ಭತ್ಯೆ, ದೂರವಾಣಿ, ಪ್ರವಾಸ ಭತ್ಯೆ ಇತ್ಯಾದಿ ಸೌಲಭ್ಯವನ್ನು ಹೆಚ್ಚಿಸುವಂತೆ ಮನವಿ ಮಾಡಿರುತ್ತಾರೆ

ಸದರಿ ಜಿಲ್ಲಾ ಪಂಚಾಯತ್‌ಗಳ ಉಪಾಧ್ಯಕ್ಷರುಗಳ ಮನವಿಗಳನ್ನು ಸರ್ಕಾರವು ಪರಿಶೀಲಿಸಲಾಗಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಾಧ್ಯಕ್ಷರ ವೇತನ ಮತ್ತು ಭತ್ಯೆಗಳನ್ನು ಹೆಚ್ಚಿಸಲು ತೀರ್ಮಾನಿಸಿ ಅದರಂತೆ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ: 189 :ಜಿಪಸ:2016 ಬೆಂಗಳೂರು ದಿನಾಂಕ:25-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಾಧ್ಯಕ್ಷರುಗಳಿಗೆ ಈ ಕೆಳಕಂಡಂತೆ ಗೌರವಧನ ಮತ್ತಿತರ ಭತ್ಯೆಗಳನ್ನು ನೀಡಿ ಆದೇಶಿಸಿದೆ.

(ರೂಗಳಲ್ಲಿ)

| ಕ್ರಸಂ | ವಿವರ | ಭತ್ಯೆ |
|---|---|---|
| 1 | ಗೌರವಧನ | 15,000.00 |
| 2 | ದಿನ ಪತ್ರಿಕೆ | 500.00 |
| 3 | ಇಂದನ ವೆಚ್ಚ (ಮಾಹೆಯಾನ) | 400ಲೀ |
| 4 | ದೂರವಾಣಿ (ಕಛೇರಿ) | 5,000.00 |
| 5 | ಮನೆ ಬಾಡಿಗೆ ವೆಚ್ಚ<br>– ಬೆಂಗಳೂರು<br>– ರಾಜ್ಯದ ಇತರೆ | <br>15,000.00<br>10,000.00 |
| 6 | ಆತಿಥ್ಯ ಭತ್ಯೆ (ವಾರ್ಷಿಕ) | 25,000.00 |

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 288 ವೆಚ್ಚ-6/2016. ದಿನಾಂಕ: 22-11-2016 ರನ್ವಯ ಹೊರಡಿಸಲಾಗಿದೆ. ಈಗಾಗಲೇ ಉಪಾಧ್ಯಕ್ಷರಿಗೆ ನೀಡುತ್ತಿದ್ದ ಲೆಕ್ಕ ಶೀರ್ಷಿಕೆಯಲ್ಲಿ ಡಿಸೆಂಬರ್ 2016ರಿಂದ ಅನ್ವಯವಾಗುವಂತೆ ಮೇಲಿನ ಗೌರವಧನ ಮತ್ತು ಇತರೆ ಭತ್ಯೆಗಳನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/11/16

(ಕೆ.ಯಾಲಕ್ಕಿ ಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

25-11-16

**ಗೆ:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು, ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 300 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.
2. ಮಹಾಲೇಖಪಾಲರು, ಕರ್ನಾಟಕ ರಾಜ್ಯ ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾಯನಿರ್ವಾಹಕ ಅಧಿಕಾರಿಗಳು, ಖಜಾನಾಧಿಕಾರಿಗಳು.
4. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿನ ಉಪಾಧ್ಯಕ್ಷರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಜಿಲ್ಲಾ ಪಂಚಾಯತಿ).
7. ಗಣಕ ಕೋಶ– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
8. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.